# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ** | **118** |
| **ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರ ಹೆಸರು** | **ಶ್ರೀ ಡಿ.ಎಸ್. ಅರುಣ್** (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| **ಉತ್ತರಿಸಬೇಕಾದ ದಿನಾಂಕ** | **09-12-2024** |
| **ಉತ್ತರಿಸುವ ಸಚಿವರು** | **ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು** |

| ಕ್ರ.ಸಂ | ಪ್ರಶ್ನೆ | ಕರಡು ಉತ್ತರಗಳು |
|---|---|---|
| ಅ) | ರಾಜ್ಯದಲ್ಲಿರುವ ಆಯುರ್ವೇದ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು; (ವಿವರ ನೀಡುವುದು) | ರಾಜ್ಯದಲ್ಲಿ ಆಯುರ್ವೇದ ವಿಶ್ವವಿದ್ಯಾಲಯ ಪ್ರಾರಂಭವಾಗಿರುವುದಿಲ್ಲ. |
| ಆ) | ಯಾವ ಯಾವ ಜಿಲ್ಲೆಗೆ ಹೊಸ ಆಯುರ್ವೇದ ವಿಶ್ವವಿದ್ಯಾಲಯಗಳನ್ನು ಮಂಜೂರು ಮಾಡಲಾಗಿದೆ; (ವಿವರ ನೀಡುವುದು) | 2021-22ನೇ ಸಾಲಿನ ಬಜೆಟ್ ಭಾಷಣದ ಕಂಡಿಕೆ 122ರಲ್ಲಿ ಭಾರತೀಯ ವೈದ್ಯ ಪದ್ಧತಿಯನ್ನು ಉತ್ತೇಜಿಸಲು ಹಾಗೂ ಸಂಶೋಧನೆಯನ್ನು ಪ್ರೋತ್ಸಾಹಿಸಲು ಶಿವಮೊಗ್ಗ ಜಿಲ್ಲೆಯಲ್ಲಿರುವ ಆಯುರ್ವೇದ ಕಾಲೇಜನ್ನು ಆಯುಷ್ ವಿಶ್ವವಿದ್ಯಾಲಯವನ್ನಾಗಿ ಮೇಲ್ದರ್ಜೆಗೇರಿಸುವ ಯೋಜನೆಯನ್ನು ಘೋಷಿಸಲಾಗಿದೆ. |
| ಇ) | ಹೊಸ ವಿಶ್ವವಿದ್ಯಾಲಯಗಳ ನಿರ್ಮಾಣಕ್ಕೆ ಕೇಂದ್ರ ಸರ್ಕಾರದಿಂದ ಬರುವ ಅನುದಾನ ಎಷ್ಟು; ರಾಜ್ಯ ಸರ್ಕಾರ ನೀಡುವ ಅನುದಾನ ಎಷ್ಟು; (ವಿವರ ನೀಡುವುದು) | • ರಾಜ್ಯ ಆಯುಷ್ ವಿಶ್ವವಿದ್ಯಾಲಯದ ಸಿವಿಲ್ ಕಾಮಗಾರಿಗಳನ್ನು ರೂ.20.00 ಕೋಟಿಗಳ ಅಂದಾಜು ವೆಚ್ಚದಲ್ಲಿ ಕೈಗೆತ್ತಿಗೊಳ್ಳಲು ಸರ್ಕಾರದ ಆದೇಶ ಸಂಖ್ಯೆ: ಆಕುಕ 20 ಪಿಟಿಡಿ 2021,ದಿನಾಂಕ:15-03-2024ರನ್ವಯ ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. (ಅನುಬಂಧ-1)<br>• ಹೊಸ ವಿಶ್ವವಿದ್ಯಾಲಯಗಳ ನಿರ್ಮಾಣಕ್ಕೆ ಈ ಹಿಂದೆ 2009ರಲ್ಲಿ ಕೇಂದ್ರ ಸರ್ಕಾರವು ಗರಿಷ್ಟ ರೂ.10.00 ಕೋಟಿಗಳಷ್ಟು ಅನುದಾನವನ್ನು ನೀಡುವ ಯೋಜನೆ ಜಾರಿಯಲ್ಲಿತ್ತು. (ಅನುಬಂಧ-2)<br>• ಪ್ರಸ್ತುತ ಕೇಂದ್ರ ಸರ್ಕಾರದ ರಾಷ್ಟ್ರೀಯ ಆಯುಷ್ ಅಭಿಯಾನದ ಮಾರ್ಗಸೂಚಿಯಡಿ ಅನುದಾನ ಒದಗಿಸಲು ಅವಕಾಶವಿರುವುದಿಲ್ಲ. |
| ಈ) | ಶಿವಮೊಗ್ಗ ಜಿಲ್ಲೆಗೆ ಹೊಸ ಆಯುರ್ವೇದ ವಿಶ್ವವಿದ್ಯಾಲಯ ಮಂಜೂರಾಗಿದ್ದು, ಅದರ ನಿರ್ಮಾಣದ ಕಾರ್ಯ ಪ್ರಾರಂಭಿಸಲು ಸರ್ಕಾರಕ್ಕಿರುವ ತೊಂದರೆ ಏನು ಮತ್ತು ಇದರ ನಿರ್ಮಾಣ ಕಾರ್ಯ ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮ ಏನು? (ವಿವರ ನೀಡುವುದು) | ಶಿವಮೊಗ್ಗ ಜಿಲ್ಲೆಯ ಸೋಗಾನೆ ಗ್ರಾಮದ ಸರ್ವೆ ನಂ.120ರಲ್ಲಿ ಹೊಸ ಆಯುರ್ವೇದ ವಿಶ್ವವಿದ್ಯಾಲಯ ಸ್ಥಾಪಿಸಲು 08 ಎಕರೆ 10 ಗುಂಟೆ ಜಮೀನು ಲಭ್ಯವಿರುತ್ತದೆ ಹಾಗೂ 2024-25ನೇ ಸಾಲಿಗೆ ರಾಜ್ಯವಲಯದಡಿ ವಿಶ್ವವಿದ್ಯಾಲಯ ಆಡಳಿತ ಕಟ್ಟಡ ನಿರ್ಮಾಣಕ್ಕೆ ಅವಶ್ಯವಿರುವ ಅನುದಾನ ರೂ.223.70 ಲಕ್ಷಗಳನ್ನು ನಿಗದಿ ಪಡಿಸುವ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ. |

**ಸಂಖ್ಯೆ: ಆಕುಕ 410 ಪಿಐಎಂ 2024**

**(ದಿನೇಶ್ ಗುಂಡೂರಾವ್)**

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

ಅನುಬಂಧ-1

17/03/24.

## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶಿವಮೊಗ್ಗ ನಗರದಲ್ಲಿ ಕರ್ನಾಟಕ ರಾಜ್ಯ ಆಯುಷ್ ವಿಶ್ವವಿದ್ಯಾನಿಲಯ ಪ್ರಾರಂಭಿಸಲು ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:**

1. ಆಯುಕ್ತರು, ಆಯುಷ್ ಇಲಾಖೆ ಇವರ ಪತ್ರ ಸಂಖ್ಯೆ: ಆಯುಷ್/29/ನೀಆವಿ/2020-21, ದಿನಾಂಕ: 03.03.2021.
2. ಸಚಿವ ಸಂಪುಟದ ವಿಷಯ ಸಂಖ್ಯೆ:ಸಿ/309/2021.
3. ಆಯುಕ್ತರು, ಆಯುಷ್ ಇಲಾಖೆ ಇವರ ಪತ್ರ ಸಂಖ್ಯೆ: ಆಯುಷ್/46/ಬಿಯುಡಿ(3)/2022-23, ದಿನಾಂಕ: 02.08.2023.

********

**ಪ್ರಸ್ತಾವನೆ:-**

ಮಾನ್ಯ ಮುಖ್ಯಮಂತ್ರಿಗಳು 2021-22ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಶಿವಮೊಗ್ಗ ನಗರದಲ್ಲಿ ಸರ್ಕಾರಿ ಆಯುರ್ವೇದ ಕಾಲೇಜನ್ನು ಆಯುರ್ವೇದ ವಿಶ್ವವಿದ್ಯಾಲಯವನ್ನಾಗಿ ಮೇಲ್ದರ್ಜೆಗೇರಿಸಲಾಗುವುದು ಎಂದು ಘೋಷಿಸಿರುತ್ತಾರೆ.

ಮೇಲೆ ಓದಲಾದ (1)ರ ಪತ್ರದಲ್ಲಿ ಆಯುಕ್ತರು,ಆಯುಷ್ ಇಲಾಖೆ ಇವರು ಕರ್ನಾಟಕ ರಾಜ್ಯದಲ್ಲಿ ಆಯುಷ್ ಪದ್ಧತಿಗಳಾದ ಆಯುರ್ವೇದ, ಯುನಾನಿ, ಹೋಮಿಯೋಪತಿ, ಪ್ರಕೃತಿ ಚಿಕಿತ್ಸೆ ಮತ್ತು ಯೋಗ ಹಾಗೂ ಸೋವಾ-ರಿಗ್ಪಾ ಪದ್ಧತಿಗಳಲ್ಲಿ ಆಯುಷ್ ಮಹಾವಿದ್ಯಾಲಯಗಳು ಇರುವುದಾಗಿ ತಿಳಿಸಿ, ಕರ್ನಾಟಕದಲ್ಲಿ ಹೊಸ ಆಯುಷ್ ವಿಶ್ವವಿದ್ಯಾಲಯವನ್ನು ಪ್ರಾರಂಭಿಸುವ ಬಗ್ಗೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ.

ಆಯುಕ್ತರು, ಆಯುಷ್ ಇವರು ವಾರ್ಷಿಕ ಸುಮಾರು 7,500 ವಿದ್ಯಾರ್ಥಿಗಳ ಪದವಿ ಹಾಗೂ 1150 ವಿದ್ಯಾರ್ಥಿಗಳ ಸ್ನಾತಕೋತ್ತರ ಪದವಿ ಕೋರ್ಸ್‌ನ ಪ್ರವೇಶಾತಿಗೆ ಅವಕಾಶವಿದ್ದು, ಬೇರೆ -ಬೇರೆ ಪದ್ಧತಿಗಳ ಪಠ್ಯಕ್ರಮ ಬೋಧನಾ ಕ್ರಮ, ಪ್ರಕಟಣೆ, ಪ್ರಕಾಶನ ಇತ್ಯಾದಿಗಳಿಗೆ ಒತ್ತು ನೀಡಲು ಪ್ರತ್ಯೇಕ ವಿಶ್ವವಿದ್ಯಾಲಯದ ಅವಶ್ಯಕತೆ ಇರುತ್ತದೆ. ಅಲ್ಲದೆ ಈಗಾಗಲೇ ಪಂಜಾಬ್, ಹರಿಯಾಣ, ಉತ್ತರಾಖಂಡ, ರಾಜಸ್ಥಾನ ಹಾಗೂ ಗುಜರಾತ್ ರಾಜ್ಯಗಳಲ್ಲಿ ಪ್ರತ್ಯೇಕವಾದ ಆಯುರ್ವೇದ ವಿಶ್ವವಿದ್ಯಾಲಯಗಳಿರುವುದಾಗಿ ತಿಳಿಸಿರುತ್ತಾರೆ

ರಾಜ್ಯದಲ್ಲಿ ಪೂರಕವಾಗಿ ಕರ್ನಾಟಕ ಔಷಧಿ ಸಸ್ಯಗಳ ಪ್ರಾಧಿಕಾರ, ಭಾರತ ಸರ್ಕಾರದ ರಾಷ್ಟ್ರೀಯ ಯುನಾನಿ ಸಂಶೋಧನಾ ಸಂಸ್ಥೆ, ಚಯಾಪಚಯ ರೋಗಗಳ ಪ್ರಾದೇಶಿಕ ಸಂಶೋಧನಾ ಸಂಸ್ಥೆ, ಪ್ರತಿಷ್ಠಿತ ನಿಮ್ಹಾನ್ಸ್ ಸಂಸ್ಥೆಯಲ್ಲಿ ಪ್ರತ್ಯೇಕ ಆಯುರ್ವೇದ ಮತ್ತು ಯೋಗ ಘಟಕಗಳು ಕಾರ್ಯನಿರ್ವಹಿಸುತ್ತಿವೆ ಬೆಳಗಾವಿಯಲ್ಲಿ ಐ.ಸಿ.ಎಂ.ಆರ್‌ನ ರಾಷ್ಟ್ರೀಯ ಪಾರಂಪರಿಕ ವೈದ್ಯಪದ್ಧತಿಯ ಸಂಶೋಧನಾ ಸಂಸ್ಥೆಯೂ ಸಹ ಇದೆ ಎಂದು ತಿಳಿಸಿ ರಾಜ್ಯದ ವಿವಿಧ ಪ್ರದೇಶಗಳು ಬೇರೆ-ಬೇರೆ ರೀತಿಯ ಜೀವ ವೈವಿಧ್ಯತೆಯನ್ನು ಹೊಂದಿದ್ದು, ಔಷಧಿ ಸಸ್ಯಗಳ ಖಜಾನೆಯಾಗಿರುವ ಪಶ್ಚಿಮ ಘಟ್ಟಗಳು, ಸಹ್ಯಾದ್ರಿ ಪರ್ವತ ಶ್ರೇಣಿಗಳು ನಮ್ಮ ರಾಜ್ಯದಲ್ಲಿವೆ. ರಾಜ್ಯದಲ್ಲಿ ಸರ್ಕಾರದ ಆಯುರ್ವೇದ ಮತ್ತು ಯುನಾನಿ ಔಷಧಿಗಳನ್ನು ತಯಾರಿಸುವ ಕೇಂದ್ರೀಯ ಔಷಧಾಗಾರವಿದೆ. ಔಷಧಿ ಪರಿವೀಕ್ಷಣಾ ಪ್ರಯೋಗಾಲಯ ಸಹ ಇದೆ. 226 ಆಯುರ್ವೇದ ಔಷಧಿ ತಯಾರಿಕಾ ಸಂಸ್ಥೆಗಳು ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿವೆ ಎಂದು ತಿಳಿಸಿರುತ್ತಾರೆ.

ಆಯುಷ್ ವಿಶ್ವವಿದ್ಯಾಲಯ ಸ್ಥಾಪನೆಗೆ ಸೂಕ್ತ ಸ್ಥಳ ನಿರ್ಧರಿಸಬೇಕಾಗಿದ್ದು, ಅಂದಾಜು ಅನುದಾನ ರೂ.500.00 ಕೋಟಿ ಅಗತ್ಯವಿದ್ದು, ಪ್ರಥಮ ಹಂತದಲ್ಲಿ ರೂ.50.00 ಕೋಟಿ ಅನುದಾನ ಹಾಗೂ ಸುಮಾರು 100 ಎಕರೆ ಸ್ಥಳಾವಕಾಶದ ಅವಶ್ಯಕತೆ ಇದೆ ಎಂದು ತಿಳಿಸಿ ಆಯವ್ಯಯ ಘೋಷಣೆಯಲ್ಲಿ ಭಾರತೀಯ ವೈದ್ಯಪದ್ಧತಿಗಳ ಬಳಕೆ, ವೃತ್ತಿಪರ ಶಿಕ್ಷಣ, ಅಭಿವೃದ್ಧಿ ಮತ್ತು ಇನ್ನಷ್ಟು ಸಂಶೋಧನೆ ಕೈಗೊಳ್ಳುವ ಉದ್ದೇಶದಿಂದ ಆಯುಷ್ ವಿಶ್ವವಿದ್ಯಾಲಯ ಸ್ಥಾಪಿಸಲು ಅಗತ್ಯವಿದೆ ಎಂದು ತಿಳಿಸಿರುತ್ತಾರೆ.

...2



Generated from eOffice by BOJARAJU, HFW-IMD-AST2(BR), ASSISTANT, HEALTH AND FAMILY WELFARE SEC on 04/12/2024 03:34 PM

ಮೇಲೆ ಓದಲಾದ ಕ್ರ.ಸಂ (2)ರಂದು ನಡೆದ ಸಚಿವ ಸಂಪುಟದ ನಿರ್ಣಯದಲ್ಲಿ, 2021-22ನೇ ಸಾಲಿಗೆ ಶಿವಮೊಗ್ಗದಲ್ಲಿ ಕರ್ನಾಟಕ ರಾಜ್ಯ ಆಯುಷ್ ವಿಶ್ವವಿದ್ಯಾಲಯವನ್ನು, ಆಯುಷ್ ಕಾಲೇಜಿನಲ್ಲಿ ಪ್ರಸ್ತುತ ಇರುವ ಸೌಲಭ್ಯಗಳನ್ನು ಉಪಯೋಗಿಸಿಕೊಂಡು, ಸಿವಿಲ್ ಕಾಮಗಾರಿಗಳನ್ನು ರೂ.20.00 ಕೋಟಿ ಅಂದಾಜು ವೆಚ್ಚದಲ್ಲಿ ಕೈಗೆತ್ತಿಕೊಳ್ಳಲು ಆಡಳಿತಾತ್ಮಕ ಅನುಮೋದನೆಯೊಂದಿಗೆ ಅನುದಾನ ಒದಗಿಸಲು ಹಾಗೂ ಶಿವಮೊಗ್ಗ ನಗರದಲ್ಲಿ ಪ್ರಾರಂಭಿಸಲು ಉದ್ದೇಶಿಸಿರುವ ಆಯುಷ್ ವಿಶ್ವವಿದ್ಯಾಲಯ ಸ್ಥಾಪಿಸಲು ಸಿದ್ಧಪಡಿಸಿರುವ The Karnataka State Ayush University Bill 2021ನ್ನು ಅನುಮೋದನೆ ನೀಡಿ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 34 ಶಾಸನ 2021, ದಿನಾಂಕ:17.02.2022 ರಂದು ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರಮಾಂಕ (3)ರ ಪತ್ರದಲ್ಲಿ, ಶಿವಮೊಗ್ಗ ಜಿಲ್ಲೆಯ ಸೋಗಾನೆ ಗ್ರಾಮದಲ್ಲಿ, ಆಯುಷ್ ವಿಶ್ವವಿದ್ಯಾಲಯದ ಆಡಳಿತ ಕಾಮಗಾರಿಗೆ ಸಲ್ಲಿಸಲಾಗಿರುವ ರೂ.2000.00 ಲಕ್ಷಗಳ ಅಂದಾಜು ಪಟ್ಟಿ ಹಾಗೂ ನೀಲನಕ್ಷೆಗೆ ಆಡಳಿತಾತ್ಮಕ ಅನುಮೋದನೆಯೊಂದಿಗೆ ಅನುದಾನ ಬಿಡುಗಡೆಗೊಳಿಸಿ ಸರ್ಕಾರದ ಮಂಜೂರಾತಿ ಆದೇಶವನ್ನು ಹೊರಡಿಸುವಂತೆ ಆಯುಕ್ತರು, ಆಯುಷ್ ಇಲಾಖೆ, ಇವರು ಕೋರಿರುತ್ತಾರೆ.

ಆಯುಕ್ತರು, ಆಯುಷ್ ಇಲಾಖೆ ಇವರ ಪ್ರಸ್ತಾವನೆ ಹಾಗೂ ಸಚಿವ ಸಂಪುಟದ ಅನುಮೋದನೆಯನ್ವಯ ಸರ್ಕಾರವು ಶಿವಮೊಗ್ಗ ನಗರದಲ್ಲಿ ಕರ್ನಾಟಕ ರಾಜ್ಯ ಆಯುಷ್ ವಿಶ್ವವಿದ್ಯಾಲಯನ್ನು ಆಯುಷ್ ಕಾಲೇಜಿನಲ್ಲಿರುವ ಪ್ರಸುತ ಸೌಲಭ್ಯಗಳನ್ನು ಉಪಯೋಗಿಸಿಕೊಂಡು, ಸಿವಿಲ್ ಕಾಮಗಾರಿಗಳನ್ನು ರೂ.20.00 ಕೋಟಿ ಅಂದಾಜು ವೆಚ್ಚದಲ್ಲಿ ಕೈಗೆತ್ತಿಕೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಲು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಆಕುಕ 20 ಪಿಟಿಡಿ 2021, ಬೆಂಗಳೂರು, ದಿನಾಂಕ:15.03.2024.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಶಿವಮೊಗ್ಗ ನಗರದಲ್ಲಿ ಕರ್ನಾಟಕ ರಾಜ್ಯ ಆಯುಷ್ ವಿಶ್ವವಿದ್ಯಾಲಯನ್ನು ಆಯುಷ್ ಕಾಲೇಜಿನಲ್ಲಿ ಪ್ರಸುತ ಇರುವ ಸೌಲಭ್ಯಗಳನ್ನು ಉಪಯೋಗಿಸಿಕೊಂಡು, ಸಿವಿಲ್ ಕಾಮಗಾರಿಗಳನ್ನು ರೂ.20.00 (ಇಪ್ಪತ್ತು ಕೋಟಿ ರೂಪಾಯಿಗಳು ಮಾತ್ರ) ಕೋಟಿಗಳ ಅಂದಾಜು ವೆಚ್ಚದಲ್ಲಿ ಕೈಗೆತ್ತಿಕೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಈ ಕಾಮಗಾರಿಯನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ಅಧಿನಿಯಮ, 1999 ಮತ್ತು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಯಲ್ಲಿ ಪಾರದರ್ಶಕತೆ ನಿಯಮಗಳು, 2000ರ ಪ್ರಕಾರ ಮಾಡತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಎಫ್‌ಡಿ 335 ವೆಚ್ಚ-5/2021, ದಿನಾಂಕ:20.07.2021 ಮತ್ತು ಸಚಿವ ಸಂಪುಟದ ಪ್ರಕರಣ ಸಂಖ್ಯೆ: ಸಿ09/2021, ದಿನಾಂಕ:22.07.2021ರಲ್ಲಿನ ಅನುಮೋದನೆಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

15/3/24
(ಎಸ್. ಪುಷ್ಪ)
ಸರ್ಕಾರದ ಜಂಟಿ ಕಾರ್ಯದರ್ಶಿ-3
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

<u>ಇವರಿಗೆ:</u>

1. ಪ್ರಧಾನ ಮಹಾಲೇಖಪಾಲರು (ಜಿ&ಎಸ್‌ಎಸ್‌ಎ/ಇ&ಆರ್‌ಎಸ್‌ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-01.
2. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-01.

...3



Generated from eOffice by BOJARAJU, HFW-IMD-AST2(BR), ASSISTANT, HEALTH AND FAMILY WELFARE SEC on 04/12/2024 03:34 PM

3. ಆಯುಕ್ತರು, ಆಯುಷ್ ಇಲಾಖೆ, ಧನ್ವಂತರಿ ರಸ್ತೆ, ಬೆಂಗಳೂರು.
4. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
5. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ., ಖನಿಜಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-4&5), ವಿಧಾನಸೌಧ, ಬೆಂಗಳೂರು.
7. ಶಾಖಾ ರಕ್ಷಾ ಕಡತ.

**ಪ್ರತಿ ಮಾಹಿತಿಗಾಗಿ:-**

1. ಮಾನ್ಯ ಆಕುಕ ಸಚಿವರ ಆಪ್ತ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.
2. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, (ಸಚಿವ ಸಂಪುಟ ಶಾಖೆ ಪ್ರಕರಣ ಸಂಖ್ಯೆ: ಸಿ309/2021)
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
4. ಸರ್ಕಾರದ ಜಂಟಿ ಕಾರ್ಯದರ್ಶಿ-3, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ.
5. ಸರ್ಕಾರದ ಅಧೀನ ಕಾರ್ಯದರ್ಶಿ, ಯೋಜನಾ ಇಲಾಖೆ



Generated from eOffice by BOJARAJU, HFW-IMD-AST2(BR), ASSISTANT, HEALTH AND FAMILY WELFARE SEC on 04/12/2024 03:34 PM

सचिव
भारत सरकार
स्वास्थ्य एवं परिवार कल्याण मंत्रालय
आयुर्वेद, योग व प्राकृतिक चिकित्सा,
यूनानी, सिद्ध एवं होम्योपैथी (आयुष) विभाग
रेड क्रॉस भवन, नई दिल्ली – 110001

SECRETARY
GOVERNMENT OF INDIA
MINISTRY OF HEALTH & FAMILY WELFARE
DEPTT. OF AYURVEDA, YOGA & NATUROPATHY,
UNANI, SIDDHA AND HOMOEOPATHY (AYUSH)
RED CROSS BUILDING, NEW DELHI-110001
Tel. : 011-23715564, Telefax : 011-23327660
E-mail : secy-ayush@nic.in

**Mailing No. 110 108**

**D.O.No.D-669/09 – Secy (AYUSH)**
**April 20, 2009.**

**SUB :** Setting up of AYUSH/Ayurveda Universities in the State Government.

**Dear**

Department of AYUSH has a provision for Centrally Sponsored Scheme for the Development of AYUSH Teaching Institutions in its budget which supports the under-graduate/post-graduate institutions and development of model colleges, etc. Under this scheme, there is also another component for supporting the efforts of the State Govts in setting up of universities of AYUSH/Ayurveda which provides funding to the tune of Rs.10.00 crores. To avail this facility identification of land and preparation of a master plan, formulation of State AYUSH University Act to set up such universities need to be prepared by the State Govts. A firm commitment of the State Govt. and well structured proposals to set up a university needs to be sent to the Deptt. of AYUSH indicating requirements of funding from Govt. of India as well as contribution of the State Govt. In order to avail the funding from Govt. of India under the scheme the Govt. of Chhatisgarh has enacted a State Act for setting up State Ayurveda universities recently. The other States too could have a look at it before framing their own enactments.

If your State intends to avail the provisions under our scheme, kindly have your proposal sent to the Deptt. of AYUSH without delay. More details of this Centrally Sponsored Scheme could be accessed from the Deptt. of AYUSH's website www.indianmedicine.nic.in under the Centrally Sponsored Scheme of Development of Institutions. Setting up of AYUSH Universities will go a long way in promoting education in this sector.

With regards.

Yours sincerely,

(S. Jalaja)

To,

All States Principal Secretaries/Secretaries (Health & AYUSH)